# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | 921 |
| ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 22.02.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಬೆಂಗಳೂರು ನಗರದಲ್ಲಿ ದಿನದಿಂದ ದಿನಕ್ಕೆ ಅಪರಾಧಗಳು ಮತ್ತು ಅಪಘಾತಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬೆಂಗಳೂರು ನಗರದಲ್ಲಿ ಅಪರಾಧ ಮತ್ತು ಅಪಘಾತ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ ಹಾಗೂ ಕಳೆದ 3 ವರ್ಷಗಳ ಮಾಹಿತಿಯನ್ನು ಈ ಕೆಳಕಂಡಂತೆ ನೀಡಲಾಗಿದೆ.<br>ಅಪರಾಧ ಪ್ರಕರಣಗಳು:
<table>
<tr><th>ವರ್ಷ</th><th>ಐಪಿಸಿ ಪ್ರಕರಣಗಳು</th><th>ಎಸ್.ಎಲ್.ಎಲ್ ಪ್ರಕರಣಗಳು</th></tr>
<tr><td>2021</td><td>21416</td><td>14894</td></tr>
<tr><td>2022</td><td>28479</td><td>17708</td></tr>
<tr><td>2023</td><td>41467</td><td>27071</td></tr>
</table>
ಅಪಘಾತ ಪ್ರಕರಣಗಳು:
<table>
<tr><th>ವರ್ಷ</th><th>ಪ್ರಕರಣಗಳ ಸಂಖ್ಯೆ</th></tr>
<tr><td>2021</td><td>3213</td></tr>
<tr><td>2022</td><td>3822</td></tr>
<tr><td>2023</td><td>4974</td></tr>
</table>
</td></tr>
<tr><td>ಆ</td><td>ಬೆಂಗಳೂರು ನಗರವನ್ನು ಅಪರಾಧ ರಹಿತ ಮತ್ತು ಅಪಘಾತ ರಹಿತ ನಗರ ವನ್ನಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>ಬೆಂಗಳೂರು ನಗರವನ್ನು ಅಪರಾಧ ರಹಿತ ಮತ್ತು ಅಪಘಾತ ರಹಿತ ನಗರವನ್ನಾಗಿಸಲು ಕೈಗೊಂಡಿರುವ ಕ್ರಮಗಳನ್ನು ಅನುಬಂಧದಲ್ಲಿ ಒದಗಿಸಿದೆ.</td></tr>
<tr><td>ಇ</td><td>ಬೆಂಗಳೂರಿನಲ್ಲಿ ಒಟ್ಟು ಎಷ್ಟು ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ; ಇವುಗಳಲ್ಲಿ ಎಷ್ಟು ಕ್ಯಾಮರಾಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಕ್ಯಾಮರಾಗಳು ಕಾರ್ಯನಿರ್ವಹಿಸುತ್ತಿಲ್ಲ; (ವಿವರ ನೀಡುವುದು)</td><td>• ಬೆಂಗಳೂರಿನಲ್ಲಿ ಸೇಫ್ ಸಿಟಿ ಪ್ರಾಜೆಕ್ಟ್ ಅಡಿಯಲ್ಲಿ ಎರಡು ಹಂತಗಳಲ್ಲಿ ಒಟ್ಟು 5058 ನೇತ್ರಾ ಕ್ಯಾಮೆರಾಗಳನ್ನು ಅಳವಡಿಸುವ ಪ್ರಕ್ರಿಯೆ ಪೂರ್ಣಗೊಂಡಿದ್ದು, ಸದರಿ ಕ್ಯಾಮರಾಗಳು ಕಾರ್ಯನಿರ್ವಹಿಸುತ್ತಿವೆ. ಇನ್ನು ಹೆಚ್ಚಿನ ಕ್ಯಾಮರಾಗಳನ್ನು ಅಳವಡಿಸುವ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ.</td></tr>
</table>

| | | |
|---|---|---|
| | | • ಬೆಂಗಳೂರು ನಗರ ಸಂಚಾರ ವಿಭಾಗಕ್ಕೆ ಸಂಪರ್ಕರಹಿತ ನಿಯಮ ಜಾರಿಯ ವ್ಯವಸ್ಥೆಯನ್ನು ಉತ್ತೇಜಿಸುವ ಸಲುವಾಗಿ ಇಂಟೆಲಿಜೆನ್ಸ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಂ ಅಡಿಯಲ್ಲಿ ಒಟ್ಟು 250 ಎ.ಎನ್.ಪಿ.ಆರ್. ಹಾಗೂ 80 ಆರ್.ಎಲ್.ಡಿ.ವಿ. ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಪರಿಣಾಮಕಾರಿಯಾಗಿ ಬಳಸಲಾಗುತ್ತಿದೆ. |
| ಈ | ಈ ಕ್ಯಾಮರಾಗಳನ್ನು Monitor ಮಾಡಲು ಹಾಗೂ ಅಪರಾಧಗಳು ಕಂಡುಬಂದಲ್ಲಿ ಸೂಕ್ತವಾದ ಕ್ರಮಗಳನ್ನು ಕೈಗೊಳ್ಳಲು ಹೊಸ ತಂತ್ರಜ್ಞಾನವನ್ನು ಅಳವಡಿಸಿ ಕೊಳ್ಳಲಾಗಿದೆಯೇ; ಅಥವಾ ಸದರಿ ಕಾರ್ಯವನ್ನು ಕೈಗೊಳ್ಳಲು ಹೊರಗುತ್ತಿಗೆ ಆಧಾರದ ಮೇಲೆ ಯಾವ ಏಜೆನ್ಸಿ ಅವರನ್ನು ನೇಮಕ ಮಾಡಲಾಗಿದೆ? (ಮಾಹಿತಿ ನೀಡುವುದು) | • ಆಯಾ ಠಾಣಾ ಸರಹದ್ದಿನಲ್ಲಿ ಅಳವಡಿಸಿರುವ ಕ್ಯಾಮೆರಾಗಳನ್ನು ಮಾನಿಟರ್ ಮಾಡಲು ಠಾಣೆಗಳಲ್ಲಿ ವ್ಯೂವಿಂಗ್(viewing) ಸೆಂಟರ್‌ಗಳನ್ನು ಅಳವಡಿಸಲಾಗಿದ್ದು, ಪೊಲೀಸ್ ಠಾಣೆಯ ಸಿಬ್ಬಂದಿಗಳು ಲೈವ್ ಹಾಗೂ ರೆಕಾರ್ಡಿಂಗ್ ದೃಶ್ಯಾವಳಿಗಳನ್ನು ವೀಕ್ಷಿಸಲು ಅವಕಾಶವಿರುತ್ತದೆ. ಸ್ಥಳೀಯ ಪೊಲೀಸ್ ಅಧಿಕಾರಿಗಳ ಜೊತೆ ನಿರಂತರ ವೈರ್‌ಲೆಸ್/ಮೊಬೈಲ್ ಸಂಪರ್ಕದಲ್ಲಿದ್ದು, ಅಗತ್ಯ ಸಂದರ್ಭಗಳಲ್ಲಿ ಹಾಗೂ ಕಾನೂನು ಬಾಹಿರ ಚಟುವಟಿಕೆಗಳು ಕಂಡುಬಂದಲ್ಲಿ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಕ್ಯಾಮೆರಾಗಳ ನಿರ್ವಹಣೆಯನ್ನು ಮಾಡಲು ಸುಸಜ್ಜಿತವಾದ ಮುಖ್ಯ ಕೇಂದ್ರದಂತೆ ಕಮಾಂಡ್ ಸೆಂಟರ್ ಕಛೇರಿಯನ್ನು ತೆರೆಯಲಾಗಿದ್ದು, ಸದರಿ ಕಛೇರಿಯಿಂದಲೇ ಬೆಂಗಳೂರಿನಾದ್ಯಂತ ಅಳವಡಿಸಲಾಗಿರುವ ಕ್ಯಾಮೆರಾಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. ಸದರಿ ಕ್ಯಾಮೆರಾಗಳ ನಿರ್ವಹಣೆಯನ್ನು ಮಾಡಲು ಪೊಲೀಸ್ ಇಲಾಖೆಯೊಂದಿಗೆ **ಮೆ:ಹನಿವೆಲ್** ಆಟೋಮೇಷನ್ ಇಂಡಿಯಾ ಲಿಮಿಟೆಡ್ ಹಾಗೂ ಸಂಚಾರ ವಿಭಾಗದ ಕ್ಯಾಮೆರಾಗಳ ನಿರ್ವಹಣೆಯನ್ನು **ಮೆ॥ ಮ್ಯಾಟ್ರಿಕ್ಸ್ ಸೆಕ್ಯೂರಿಟಿ ಸಲ್ಯೂಷನ್ಸ್** ಪ್ರೈವೇಟ್ ಲಿಮಿಟೆಡ್ ರವರುಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೀಡಲಾಗಿರುತ್ತದೆ. |

ಹೆಚ್‌ಡಿ 65 ಎಸ್‌ಎಸ್‌ಟಿ 2024

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು

## ಅನುಬಂಧ

**ಬೆಂಗಳೂರು ನಗರದಲ್ಲಿ ಅಪರಾಧ ಕೃತ್ಯಗಳನ್ನು ಕಡಿವಾಣ ಹಾಕಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.**

- ನಗರದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಬೀಟ್ ವ್ಯವಸ್ಥೆ ಮಾಡಲಾಗಿದೆ ಹಾಗೂ ಸದರಿ ಬೀಟ್‌ಗಳಿಗೆ ಉಸ್ತುವಾರಿ ಅಧಿಕಾರಿಗಳನ್ನು ನೇಮಕ ಮಾಡಿ, ಯಾವುದೇ ಅಪರಾಧ ಕೃತ್ಯಗಳು ಜರುಗದಂತೆ ನಿಗಾವಹಿಸಲಾಗುತ್ತಿದೆ. ಒಂದು ವೇಳೆ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳ ಕರ್ತವ್ಯ ನಿರ್ಲಕ್ಷತೆಯಿಂದಾಗಿ ಅಪರಾಧ ಕೃತ್ಯಗಳು ಜರುಗಲು ಕಾರಣವಾಗಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮವನ್ನು ಜರುಗಿಸಲಾಗುತ್ತಿದೆ.
- ನಗರದಲ್ಲಿ ಸೈಬರ್ ಅಪರಾಧ ಕೃತ್ಯಗಳನ್ನು ತಡೆಗಟ್ಟುವ ಸಂಬಂಧ ವಿಭಾಗದ ಮಟ್ಟದಲ್ಲಿ ಒಂದು ಸೆನ್ ಪೊಲೀಸ್ ಠಾಣೆಯನ್ನು ತೆರೆಯಲಾಗಿದೆ. ಅಲ್ಲದೇ, ಪ್ರತೀ ಠಾಣೆಯಲ್ಲಿ ಸೈಬರ್ ಅಪರಾಧಗಳನ್ನು ದಾಖಲಿಸಿಕೊಂಡು ನೊಂದ ವ್ಯಕ್ತಿಗಳಿಗೆ ನ್ಯಾಯದೊರಕಿಸಿ ಕೊಡಲು ಶ್ರಮಿಸಲಾಗುತ್ತಿದೆ.
- ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ:ಹೆಚ್‌ಡಿ 267 ಎಸ್‌ಎಸ್‌ಟಿ 2018 ದಿನಾಂಕ:28.09.2018 ರಲ್ಲಿ ನೀಡಿರುವ ಪ್ರದತ್ತವಾದ ಅಧಿಕಾರದನ್ವಯ ಮತ್ತು ಪದೇ ಪದೇ ಅಪರಾಧ ಕೃತ್ಯಗಳಲ್ಲಿ ತೊಡಗಿರುವ ರೌಡಿ ಆಸಾಮಿಗಳ ಬಗ್ಗೆ ನಿಗಾವಹಿಸಿ ಅವರುಗಳ ವಿರುದ್ಧ ಸುಮೋಟೋ ಪ್ರಕರಣವನ್ನು ದಾಖಲಿಸಿ ಗಡಿಪಾರು ಮಾಡುವಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.
- ನಗರದ ಎಲ್ಲಾ ಪ್ರದೇಶಗಳಲ್ಲಿ ಸುಸಜ್ಜಿತವಾದ ಗಸ್ತು ಕರ್ತವ್ಯವನ್ನು ನಿರ್ವಹಿಸಲು ನಗರದಲ್ಲಿ ಒಟ್ಟು 241 ಹೊಯ್ಸಳ ವಾಹನವನ್ನು ಮತ್ತು 1954 ದ್ವಿ-ಚಕ್ರ ಚೀತಾ ವಾಹನಗಳನ್ನು ನಿಯೋಜಿಸಲಾಗಿದೆ. ಈ ಮೂಲಕ ನಗರದ ಯಾವುದೇ ಸ್ಥಳದಿಂದ 112 ಸಂಖ್ಯೆಗೆ ಕರೆಮಾಡಿ 07 ನಿಮಿಷಗಳ ಒಳಗಾಗಿ ಆ ಸ್ಥಳವನ್ನು ತಲುಪಿ ನೊಂದ ವ್ಯಕ್ತಿಗೆ ನ್ಯಾಯಕೊಡಿಸುವ ಹಾಗೂ ಅಪರಾಧ ಕೃತ್ಯವನ್ನು ತಡೆಯುವ ಯೋಜನೆಯನ್ನು ರೂಪಿಲಾಗಿದೆ.
- ಪ್ರತಿ ಠಾಣೆಗಳಲ್ಲಿ ಜನಸ್ನೇಹಿ ಸಂಪರ್ಕ ಕೇಂದ್ರಗಳನ್ನು ತೆರೆದಿದ್ದು, ಆಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜನಸ್ನೇಹಿ ಸಭೆಗಳನ್ನು ನಡೆಸಿ, ಅವರಿಗೆ ಅಪರಾಧ ಕೃತ್ಯಗಳ ಬಗ್ಗೆ ಅರಿವು ಮೂಡಿಸಿ, ಅಲ್ಲಿನ ಭಾತ್ಮೀದಾರರ ಮೂಲಕ ಅಪರಾಧ ಕೃತ್ಯಗಳ ಬಗ್ಗೆ ಆರೋಪಿಗಳ ಬಗ್ಗೆ ಹಾಗೂ ಅಲ್ಲಿನ ಆಗು-ಹೋಗುಗಳ ಬಗ್ಗೆ ಮಾಹಿತಿ ಸಂಗ್ರಹಿಸಿ, ಶಾಂತಿ ಸುವ್ಯವಸ್ಥೆಯನ್ನು ಕಾಪಾಡಲು ಕ್ರಮವಹಿಸಲಾಗುತ್ತಿದೆ.
- ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿ ಶಾಂತಿ ಸುವ್ಯವಸ್ಥೆಯನ್ನು ಹಾಳು ಮಾಡುವವರ ವಿರುದ್ಧ ಗೂಂಡಾ ಕಾಯ್ದೆ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಿ, ಅವರುಗಳು ಇತರೆ ಅಪರಾಧಿಗಳೊಂದಿಗೆ ಸೇರಿ ನಡೆಸುವ ಕೃತ್ಯಗಳ ಬಗ್ಗೆ ಹಾಗೂ ಚಲನವಲನಗಳ ಬಗ್ಗೆ ನಿಗಾವಹಿಸಲಾಗುತ್ತಿದೆ.
- ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯ ಹಾಗೂ ಅತ್ಯಾಚಾರದಂತಹ ಕೃತ್ಯಗಳನ್ನು ತಡೆಗಟ್ಟುವ ಸಲುವಾಗಿ ಗಸ್ತು ವ್ಯವಸ್ಥೆಯನ್ನು ಬಿಗಿಗೊಳಿಸಿದ್ದು, ಹಗಲು ಮತ್ತು ರಾತ್ರಿ ವೇಳೆ ಗಸ್ತು ಕರ್ತವ್ಯಕ್ಕೆ ನೇಮಕ ಮಾಡುವಾಗ ಸಿಬ್ಬಂದಿಯವರುಗಳಿಗೆ ಮಹಿಳೆಯರು ಮತ್ತು ಹೆಣ್ಣು ಮಕ್ಕಳು

ಯಾವುದೇ ರೀತಿ ಸಮಸ್ಯೆಗಳನ್ನು ತಿಳಿಸಿದ್ದಲ್ಲಿ ಕೂಡಲೇ ಆ ಬಗ್ಗೆ ಠಾಣಾಧಿಕಾರಿಗಳಿಗೆ ಹಾಗೂ ಠಾಣಾ ಸರಹದ್ದಿನಲ್ಲಿ ಗಸ್ತಿನಲ್ಲಿರುವ ಅಧಿಕಾರಿಗಳಿಗೆ ವಿಷಯವನ್ನು ತಿಳಿಸಿ ತ್ವರಿತವಾಗಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳ ಸಮಸ್ಯೆಗಳನ್ನು ಕಾನೂನಿನ ಅಡಿಯಲ್ಲಿ ಬಗೆಹರಿಸಿ ಸಮಸ್ಯೆಗಳನ್ನು ಪರಿಹರಿಸಿಕೊಡುವಂತೆ ತಿಳುವಳಿಕೆ ನೀಡಲಾಗಿದೆ.

- ಮಹಿಳೆಯರ ರಕ್ಷಣೆಗಾಗಿ ಸೇಫ್ ಸಿಟಿ ಪ್ರಾಜೆಕ್ಟ್‌ನ ಅಡಿಯಲ್ಲಿ ಒಟ್ಟು 7500 ಸಿ.ಸಿ.ಟಿವಿ ಗಳನ್ನು ಅಳವಡಿಸಲಾಗಿದೆ ಹಾಗೂ ಅವರ ನೆರವಿಗಾಗಿ 24/7 ಸಮಯಕಾಲ ಸ್ಪಂದಿಸಲು **'ಕಮಾಂಡ್ ಸೆಂಟರ್'** ಅನ್ನು ತೆರೆದಿದ್ದು, ಸದರಿ ಕಮಾಂಡ್ ಸೆಂಟರ್‌ನಲ್ಲಿ ನುರಿತ ತಾಂತ್ರಿಕ ಸಿಬ್ಬಂದಿಗಳನ್ನು ನಿಯೋಜಿಸಲಾಗಿರುತ್ತದೆ. ಈ ಮೂಲಕ ನಗರದ ಯಾವುದೇ ಭಾಗದಿಂದ ಮಹಿಳೆಯರು ತೊಂದರೆಗೆ ಒಳಗಾಗಿ 112 ಸಂಖ್ಯೆಗೆ ಕರೆ ಮಾಡಿದಾಗ ತಕ್ಷಣ ನೆರವು ನೀಡಲು ಶ್ರಮಿಸಲಾಗುತ್ತಿದೆ.
- ರಾತ್ರಿ ವೇಳೆಯಲ್ಲಿ ಹಾಗೂ ನಿರ್ಜನ ಪ್ರದೇಶಗಳಲ್ಲಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳು ಸಂಚರಿಸಬೇಕಾದ ಸಂದರ್ಭ ಬಂದಲ್ಲಿ ಮಹಿಳಾ ಪೊಲೀಸ್ ಸಿಬ್ಬಂದಿಯವರು ಅವರುಗಳನ್ನು ಸುರಕ್ಷಿತ ಸ್ಥಳದವರೆಗೆ ಬಿಟ್ಟು ಬರುವಂತೆ ಸೂಚನೆ ನೀಡಲಾಗಿದೆ.
- ಬೆಂಗಳೂರು ನಗರದ ಪೊಲೀಸ್ ಠಾಣಾ ಸರಹದ್ದುಗಳಲ್ಲಿ ಜನಸ್ನೇಹಿ ಬೀಟ್‌ಗಳನ್ನು ಪ್ರಾರಂಭ ಮಾಡಿದ್ದು, ಸದರಿ ಜನಸ್ನೇಹಿ ಬೀಟುಗಳಲ್ಲಿ ನಾಗರೀಕ ಸಮಿತಿ ಸದಸ್ಯರ, ಶಾಂತಿ ಪಾಲನಾ ಸಮಿತಿ ಸದಸ್ಯರ ಹಾಗೂ ಹಿರಿಯ ನಾಗರೀಕರ ಸಭೆಗಳನ್ನು ಏರ್ಪಡಿಸಲಾಗುತ್ತಿದೆ. ಮತ್ತು ಆ ಸಭೆಗಳಲ್ಲಿ ಮಹಿಳೆಯರಿಗೆ ಮತ್ತು ಹೆಣ್ಣು ಮಕ್ಕಳಿಗೆ ರಕ್ಷಣೆಯನ್ನು ನೀಡುವ ವಿಷಯಕ್ಕೆ ಸಂಬಂಧಪಟ್ಟಂತೆ ಸಾರ್ವಜನಿಕರಿಂದ ಪೊಲೀಸರಿಗೆ ಯಾವ ರೀತಿ ಮಾಹಿತಿಯನ್ನು ಒದಗಿಸಬಹುದು ಎಂಬ ಬಗ್ಗೆ ಹಾಗೂ ಮಹಿಳೆಯರಿಗೆ ಮತ್ತು ಹೆಣ್ಣು ಮಕ್ಕಳಿಗೆ ಪೊಲೀಸರು ಯಾವ ರೀತಿಯ ರಕ್ಷಣೆಯನ್ನು ನೀಡಲಾಗುವುದು ಎಂಬ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಗುತ್ತಿದೆ. ಇದರಿಂದಾಗಿ ಮಹಿಳೆಯರಿಗೆ ಮತ್ತು ಹೆಣ್ಣು ಮಕ್ಕಳಿಗೆ ರಕ್ಷಣೆಯನ್ನು ನೀಡಲು ನೆರವಾಗುತ್ತಿದೆ.
- ಮಹಿಳೆಯರಿಗೆ ಠಾಣೆಯ ಮತ್ತು ಅಧಿಕಾರಿಗಳ ದೂರವಾಣಿ ಸಂಖ್ಯೆಗಳನ್ನು ನೀಡಿ, ಯಾರಾದರೂ ಅನುಮಾನಾಸ್ಪದ/ ಅಪರಿಚಿತ ವ್ಯಕ್ತಿಗಳು ತಮ್ಮ ಮನೆಯ ಬಳಿ ಕಂಡು ಬಂದಲ್ಲಿ ಠಾಣೆಗೆ ದೂರವಾಣಿ ಕರೆ ಮಾಡಿ ಮಾಹಿತಿ ನೀಡುವಂತೆ ತಿಳುವಳಿಕೆ ನೀಡಲಾಗಿರುತ್ತದೆ.
- ಮಹಿಳೆಯರ ಸುರಕ್ಷತೆಗಾಗಿ 'ಸೇಫ್ಟಿ ಐಲ್ಯಾಂಡ್'ಗಳನ್ನು ಸ್ಥಾಪಿಸಿದ್ದು, ಹಾಗೂ ನೆರವು ಕೇಂದ್ರಗಳನ್ನು ಸ್ಥಾಪಿಸಿದ್ದು ಮಹಿಳೆಯರು ನೀಡುವ ದೂರುಗಳಿಗೆ ಕೂಡಲೇ ಸ್ಪಂದಿಸಲಾಗುತ್ತಿದೆ.
- ಮಹಿಳೆಯರು ಕಾರ್ಯನಿರ್ವಹಿಸುವ ಕಛೇರಿಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಲೈಂಗಿಕ ಅಪರಾಧಗಳಿಗೆ ಒಳಗಾಗುತ್ತಿರುವ ಬಗ್ಗೆ ಅರಿವು ಮೂಡಿಸಿ, ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿರುತ್ತದೆ.
- ಬೆಂಗಳೂರು ನಗರದ ಶಾಲಾ ಕಾಲೇಜುಗಳಲ್ಲಿ ಮೇಲಿಂದ ಮೇಲೆ ಸಭೆಗಳನ್ನು ನಡೆಸಿ, ರ್‍ಯಾಗಿಂಗ್ ಮತ್ತು ಲೈಂಗಿಕ ಕಿರುಕುಳ ಹಾಗೂ ದೌರ್ಜನ್ಯ ನಡೆಯುತ್ತಿರುವ ಬಗ್ಗೆ ಅರಿವು ಮೂಡಿಸಿ, ಅವುಗಳಿಂದ ರಕ್ಷಣೆ ಪಡೆಯಬಹುದಾದ ಮಾರ್ಗಗಳ ಬಗ್ಗೆ ಮಾಹಿತಿ ನೀಡಲಾಗಿರುತ್ತದೆ.

- ಶೋಷಣೆ ಮತ್ತು ದೌರ್ಜನ್ಯಕ್ಕೆ ಒಳಗಾದ ಮಹಿಳೆಯರು ನಿರ್ಭೀತವಾಗಿ ಕಾನೂನು ರಕ್ಷಣೆ ಪಡೆದುಕೊಳ್ಳುವ ಕುರಿತಾಗಿ ಅರಿವು ಮೂಡಿಸಲಾಗಿರುತ್ತದೆ.
- ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರನ್ನು ಸುರಕ್ಷಿತವಾಗಿ ನೋಡಿಕೊಳ್ಳುವ ಸಂಬಂಧ ನಿರ್ಭಯಾ ಯೋಜನೆ ಅಡಿಯಲ್ಲಿ ನಗರದ ಎಲ್ಲೆಡೆ ಸಿ.ಸಿ.ಟಿವಿ ಕ್ಯಾಮರಾಗಳನ್ನು ಅಳವಡಿಸಿದ್ದು, ಸದರಿ ಸಿ.ಸಿ.ಟಿವಿ ಗಳ ಮಾನಿಟರಿಂಗ್ ಮಾಡಲು ನುರಿತ ತಾಂತ್ರಿಕ ಸಿಬ್ಬಂದಿಗಳನ್ನು ನಿಯೋಜಿಸಿ ಸದಾ ಕಣ್ಗಾವಲು ಮಾಡಲಾಗುತ್ತಿದೆ.
- ಅಲ್ಲದೇ, ಬೆಂಗಳೂರು ನಗರದಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆಗಟ್ಟಲು ಎಲ್ಲಾ ರೀತಿಯ ತಾಂತ್ರಿಕ ವ್ಯವಸ್ಥೆಗಳನ್ನು ಬಳಕೆ ಮಾಡಿಕೊಳ್ಳಲಾಗುತ್ತಿದೆ.
- ಅಪರಾಧಗಳ ನಿಯಂತ್ರಣಕ್ಕಾಗಿ ಸಿ.ಸಿ.ಬಿ. ಘಟಕದಲ್ಲಿ 06 ದಳಗಳಿದ್ದು, 1) ವಿಶೇಷ ವಿಚಾರಣಾ ದಳ, 2) ಮಹಿಳಾ ಸಂರಕ್ಷಣಾ ದಳ, 3)ಮಾದಕ ದ್ರವ್ಯ ನಿಗ್ರಹ ದಳ, 4) ಆರ್ಥಿಕ ಅಪರಾಧ ದಳ, 5) ಸಂಘಟಿತ ಅಪರಾಧ ದಳ ಪೂರ್ವ ಮತ್ತು 6) ಸಂಘಟಿತ ಅಪರಾಧ ದಳ ಪಶ್ಚಿಮ ಎಂಬ ದಳಗಳು ಸದಾ ಕಾರ್ಯಪ್ರವೃತ್ತವಾಗಿರುತ್ತವೆ.
- ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸುವುದನ್ನು ತಡೆಗಟ್ಟುವ ಸಂಬಂಧ ಸೋಷಿಯಲ್ ಮೀಡಿಯಾ ಶಾಖೆಯನ್ನು ಸ್ಥಾಪಿಸಿದ್ದು, ಸದರಿ ಸೋಷಿಯಲ್ ಮೀಡಿಯಾ ಅಧಿಕಾರಿ/ಸಿಬ್ಬಂದಿಗಳು ಸದಾ ಸಾಮಾಜಿಕ ಜಾಲತಾಣಗಳನ್ನು ನಿಗಾವಣೆ ಮಾಡುತ್ತಿರುತ್ತಾರೆ.

**<u>ಅಪಘಾತಗಳನ್ನು ನಿಯಂತ್ರಣ ಮಾಡುವ ನಿಟ್ಟಿನಲ್ಲಿಕೈಗೊಂಡಿರುವ ಸುರಕ್ಷತಾ ಕ್ರಮಗಳು:</u>**

ರಸ್ತೆ ಅಪಘಾತಗಳಿಗೆ ಸಂಚಾರ ನಿಯಮಗಳನ್ನು ಪಾಲಿಸದೇ ಇರುವುದು ಒಂದು ಪ್ರಮುಖಕಾರಣವಾಗಿದ್ದು, ಸಂಚಾರ ನಿಯಮ ಉಲ್ಲಂಘನೆಗಳನ್ನು ತಡೆಗಟ್ಟಲು ಪ್ರವರ್ತನ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಕೈಗೊಳ್ಳಲು ಕ್ರಮ ವಹಿಸಲಾಗಿರುತ್ತದೆ. ಬೆಂಗಳೂರು ನಗರದಲ್ಲಿ ಸಂಪರ್ಕ ಸಹಿತ ಹಾಗೂ ಸಂಪರ್ಕರಹಿತ ನಿಯಮ ಜಾರಿಯಡಿಯಲ್ಲಿ ಪ್ರವರ್ತನ ಚಟುವಟಿಕೆಯನ್ನು ಕೈಗೊಳ್ಳಲಾಗುತ್ತಿದ್ದು, ಕಳೆದ ವರ್ಷದಲ್ಲಿ ದಾಖಲು ಮಾಡಲಾಗಿರುವ ಪ್ರಕರಣಗಳ ವಿವರ ಈ ಕೆಳಕಂಡಂತಿರುತ್ತದೆ;

- ಶಾಲಾ / ಕಾಲೇಜು ಮಕ್ಕಳಿಗೆ ಸಂಚಾರ ನಿಯಮಗಳು ಮತ್ತು ಅವುಗಳ ಪಾಲನೆಯ ಮಹತ್ವ ಹಾಗೂ ರಸ್ತೆ ಸುರಕ್ಷತೆ ಬಗ್ಗೆ ತಿಳುವಳಿಕೆ ನೀಡುವ ಕಾರ್ಯಕ್ರಮವನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದ್ದು, ಆ ಮೂಲಕ ರಸ್ತೆ ಅಪಘಾತಗಳನ್ನು ತಡೆಗಟ್ಟಲುಕ್ರಮ ಕೈಗೊಳ್ಳಲಾಗುತ್ತಿದೆ.
- ಆಟೋ ಚಾಲಕರ ಸಂಘ, & ಸರಕು ಸಾಗಣೆ ವಾಹನಗಳ ಚಾಲಕರ ಸಂಘ, ಖಾಸಗೀ ಕಂಪನಿಗಳ ವಾಹನಗಳ ಚಾಲಕರುಗಳು ಹಾಗೂ ಬಿಎಂಟಿಸಿ ಬಸ್ ಡಿಪೋಗೆ ಭೇಟಿ ನೀಡಿ ಸಭೆ ನಡೆಸಿ ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

- ಸಾರ್ವಜನಿಕರಿಗೆ ಹಾಗೂ ವಾಹನ ಚಾಲಕರಿಗೆ ರಸ್ತೆ ನಿಯಮಗಳನ್ನು ಪಾಲಿಸುವಂತೆ ಜಾಗೃತಿ ಮೂಡಿಸಲಾಗುತ್ತಿರುತ್ತದೆ.
- ಪಾದಚಾರಿಗಳು ಎಲ್ಲೆಂದರಲ್ಲಿ ರಸ್ತೆದಾಟದ ಹಾಗೆ ಸೆಂಟರ್ ಮೀಡಿಯನ್ ಮೇಲೆ ಎತ್ತರದ ಗ್ರಿಲ್ ಹಾಕುವ ಕುರಿತು ಸಂಬಂಧಪಟ್ಟ ಇಲಾಖೆಗೆ ವಿವರಗಳನ್ನು ಸಲ್ಲಿಸಲಾಗಿರುತ್ತದೆ.
- ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡುವ ಚಾಲಕ/ಸವಾರರುಗಳ ವಿರುದ್ಧ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಲಾಗುತ್ತಿರುತ್ತದೆ.
- ರಸ್ತೆಯಲ್ಲಿ ಎಲ್ಲೆಂದರಲ್ಲಿ ನಿಲುಗಡೆಯಾಗುತಿದ್ದ ವಾಹನಗಳನ್ನು ವ್ಹೀಲ್ ಕ್ಯಾಂಪ್ ಹಾಕಿ, ತೆರವುಗೊಳಿಸಿ ವಾಹನಗಳು ಸುಗಮವಾಗಿ ಓಡಾಡಲು ಅನುವು ಮಾಡಿಕೊಡಲಾಗಿದೆ. ಈ ಮೂಲಕ ರಸ್ತೆ ಅಪಘಾತಗಳನ್ನು ಕಡಿಮೆ ಮಾಡಲು ಕ್ರಮಕೈಗೊಂಡಿದೆ.
- ರಸ್ತೆ ಅಪಘಾತಗಳಿಗೆ ಕಾರಣವಾಗಬಹುದಾದ, ಪಾಟ್ ಹೋಲ್ಸ್‌ಗಳು, ಮ್ಯಾನ್ ಹೋಲ್ಸ್‌ಗಳು, ಅವೈಜ್ಞಾನಿಕ ರಸ್ತೆ ಉಬ್ಬರಗಳು ಹಾಗೂ ಇತರೆ ಪ್ರಮುಖ ಕಾರಣಗಳನ್ನು ಗುರ್ತಿಸಿ, ಸದರಿ ಕಾಮಗಾರಿಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ಬಿ.ಬಿ.ಎಂ.ಪಿ. ರವರಿಗೆ ಪಟ್ಟಿ ಮಾಡಿ ಮಾಹಿತಿಯನ್ನು ರವಾನಿಸಲಾಗಿರುತ್ತದೆ.
- ವಾಹನಗಳ ವೇಗವನ್ನು ನಿಯಂತ್ರಿಸಲು ರಸ್ತೆ ವೈಜ್ಞಾನಿಕ ರಸ್ತೆ ಉಬ್ಬರಗಳನ್ನು ನಿರ್ಮಿಸಲು ಬಿ.ಬಿ.ಎಂ.ಪಿ ಸಹಯೋಗದೊಂದಿಗೆ ಕ್ರಮಕೈಗೊಳ್ಳಲಾಗುತ್ತಿದೆ.
- ಪಾದಾಚಾರಿಗಳ ಸುರಕ್ಷತೆಗಾಗಿ ಬಿ.ಬಿ.ಎಂ.ಪಿ ಸಹಯೊಗದೊಂದಿಗೆ ಹೊಸದಾಗಿ ಪಾದಾಚಾರಿ ರಸ್ತೆಗಳನ್ನು ನಿರ್ಮಿಸಿ, ಪಾದಚಾರಿ ರಸ್ತೆಗೆ ಗ್ರಿಲ್‌ಗಳನ್ನು ಅಳವಡಿಸಿ, ಸ್ಕೈವಾಕ್ ನಿರ್ಮಿಸಿ ರಸ್ತೆ ಅಪಘಾತಗಳನ್ನು ಕಡಿಮೆ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ.
- 2020, 2021 & 2022ನೇ ಸಾಲಿಗೆ ಅನ್ವಯವಾಗುವಂತೆ ಪದೇ ಪದೇ ಅಪಘಾತಗಳು ಸಂಭವಿಸುವ ಒಟ್ಟು 60 ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಲಾಗಿದ್ದು, ಸದರಿ ಬ್ಲಾಕ್ ಸ್ಪಾಟ್‌ಗಳಲ್ಲಿ ರಸ್ತೆ ಅಪಘಾತಗಳಿಗೆ ಸಾಮಾನ್ಯ ಕಾರಣಗಳು ಏನು? ಎಂಬ ಬಗ್ಗೆ ವಿಮರ್ಶೆಯನ್ನು ನಡೆಸಿ, ಸದರಿ ಸ್ಥಳಗಳಲ್ಲಿ ಅಪಘಾತಗಳನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳು ಹಾಗೂ ಕೈಗೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ಇತರೆ ಪೌರಸಂಸ್ಥೆಯ ಅಧಿಕಾರಿಗಳೊಂದಿಗೆ ಚರ್ಚೆಯನ್ನು ನಡೆಸಿ ಮಾಹಿತಿಯನ್ನು ಸಂಬಂಧಪಟ್ಟ ಇಲಾಖೆಗೆ ಸಲ್ಲಿಸಲು ಕ್ರಮಕೈಗೊಂಡಿರುತ್ತದೆ.
- ವಿವಿಧ ಮಾದರಿಯ ವಾಹನಗಳ ಚಾಲಕರು/ಸವಾರರಿಗೆ ಸಂಚಾರ ನಿಯಮಗಳು ಮತ್ತು ಅವುಗಳ ಪಾಲನೆಯ ಮಹತ್ವವನ್ನು ತಿಳಿಸಲು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಆ ಮೂಲಕ ಸಂಚಾರ ನಿಯಮಗಳ ಬಗ್ಗೆ ಅರಿವು ಮೂಡಿಸಿ ರಸ್ತೆ ಅಪಘಾತಗಳನ್ನು ಕಡಿಮೆ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ.
- ಸಾರ್ವಜನಿಕರು ತಮ್ಮ ದಿನ ನಿತ್ಯದ ಓಡಾಟಕ್ಕೆ ಸಾರ್ವಜನಿಕ ಸಾರಿಗೆಗಳಾದ ಬಿ.ಎಂ.ಟಿ.ಸಿ, ಕೆ.ಎಸ್.ಆರ್.ಟಿ.ಸಿ ಬಸ್ಸುಗಳು, ಮೆಟ್ರೋರೈಲು, ರೈಲುಗಳನ್ನು ಹೆಚ್ಚಾಗಿ ಬಳಸುವಂತೆ ತಿಳುವಳಿಕೆ ಮೂಡಿಸುವ ಮತ್ತು ಅದಕ್ಕಾಗಿ ಪ್ರಚಾರಗಳನ್ನು ಕೈಗೊಂಡು ವಾಹನ

ದಟ್ಟಣೆಯನ್ನು ಕಡಿಮೆ ಮಾಡಿ ರಸ್ತೆ ಅಪಘಾತಗಳನ್ನು ನಿಯಂತ್ರಣಕ್ಕೆ ತರಲುಕ್ರಮ ಕೈಗೊಳ್ಳಲಾಗುತ್ತಿದೆ.

- ದ್ವಿಚಕ್ರ ವಾಹನ ಸವಾರರು ಗುಣಮಟ್ಟದ ಹೆಲ್ಮೆಟ್ ಧರಿಸುವಂತೆ ಮತ್ತು ವಾಹನಗಳನ್ನು ಸುರಕ್ಷಿತವಾಗಿ ಚಾಲನೆ ಮಾಡುವ ಬಗ್ಗೆ ತಿಳುವಳಿಕೆ ನೀಡಲು ಕ್ರಮಕೈಗೊಳ್ಳಲಾಗಿರುತ್ತದೆ.
- ಪ್ರಿಂಟ್ ಮತ್ತು ಎಲೆಕ್ಟ್ರಾನಿಕ್ ಮಾಧ್ಯಮಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ ಮಹತ್ವ ಮತ್ತು ರಸ್ತೆ ಸುರಕ್ಷತೆ ಕುರಿತು ಅರಿವನ್ನು ಮೂಡಿಸಿ ರಸ್ತೆ ಅಪಘಾತಗಳ ನಿಯಂತ್ರಣಕ್ಕೆ ಕ್ರಮಕೈಗೊಳ್ಳಲಾಗುತ್ತಿದೆ.
- ಠಾಣಾ ಸರಹದ್ದುಗಳಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಪಟ್ಟಿ ಮಾಡಿ ಸರಿಪಡಿಸಿ ಕೊಡುವಂತೆ ಬಿ.ಬಿ.ಎಂ.ಪಿಗೆ ಮನವಿ ಮಾಡಲಾಗಿರುತ್ತದೆ. ಆ ಮೂಲಕ ಸಂಭವನೀಯ ರಸ್ತೆ ಅಪಘಾತಗಳನ್ನು ನಿಯಂತ್ರಿಸಲು ಸತತವಾಗಿ ಪ್ರಯತ್ನಿಸಲಾಗುತ್ತಿದೆ.
- ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುವ ಸ್ಥಳಗಳಲ್ಲಿ 2 ಪಾಳಿಯಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ವಾಹನಗಳ ಸುಗಮ ಸಂಚಾರ ನಿರ್ವಹಣೆ ಕರ್ತವ್ಯಕ್ಕೆ ನೇಮಿಸಲು ಹಾಗೂ ಅಗತ್ಯ ಸೂಚನಾ ಫಲಕಗಳನ್ನು ಅಳವಡಿಸಲು ಕ್ರಮಕೈಗೊಂಡಿರುತ್ತದೆ.
- ಬಿ.ಬಿ.ಎಂ.ಪಿಯ ಸಹಯೋಗದೊಂದಿಗೆ ಸೆಂಟರ್ ಮೀಡಿಯನ್‌ಗಳನ್ನು ನಿರ್ಮಿಸುವ ಮೂಲಕ ವಾಹನಗಳ ಸಂಘರ್ಷಣೆಯನ್ನು ನಿಯಂತ್ರಿಸಿ ರಸ್ತೆ ಅಪಘಾತಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಬೀದಿ ದೀಪಗಳು ಸರಿಯಿಲ್ಲದೇ ಇರುವ ಸ್ಥಳಗಳು ಮತ್ತು ಹೊಸದಾಗಿ ಬೀದಿ ದೀಪಗಳ ಅವಶ್ಯಕತೆ ಇರುವ ಸ್ಥಳಗಳನ್ನು ಪಟ್ಟಿಮಾಡಿ ಸರಿಪಡಿಸಲು ಮತ್ತು ಹೊಸದಾದ ಬೀದಿ ದೀಪಗಳನ್ನು ಅಳವಡಿಸಲು ಬೆಸ್ಕಾಂನೊಂದಿಗೆ ಪತ್ರ ವ್ಯವಹಾರ ಮಾಡಲಾಗಿರುತ್ತದೆ.
- ಜೀಬ್ರಾ ಕ್ರಾಸಿಂಗ್‌ಗೆ ಬಣ್ಣ ಬಳಿಸಲು ಸ್ಥಳಗಳನ್ನು ಪಟ್ಟಿ ಮಾಡಿ ಬಿ.ಬಿ.ಎಂ.ಪಿಗೆ ನೀಡಿದ್ದು ಅದರ ಸಹಯೋಗದೊಂದಿಗೆ ಜೀಬ್ರಾ ಕ್ರಾಸಿಂಗ್‌ಗೆ ಬಣ್ಣ ಬಳಿಸಲಾಗುತ್ತಿದೆ.
- ಬಿ.ಎಂ.ಟಿ.ಸಿ ಸಂಸ್ಥೆಯ ಒಟ್ಟು 200 ಚಾಲಕರುಗಳಿಗೆ ಸೇವ್ ಲೈಫ್ ಫೌಂಡೇಷನ್ ವತಿಯಿಂದ ಸುರಕ್ಷತಾ ಚಾಲನೆ (ಡಿಫೆನ್ಸೀವ್ ಡ್ರೈವಿಂಗ್ ಎಂಬ ವಿಷಯದ ಬಗ್ಗೆ ಪ್ರಾತ್ಯಕ್ಷಿಕೆಗಳನ್ನು ಬಳಸಿ ತರಬೇತಿಯನ್ನು ನೀಡಲಾಗುತ್ತಿದೆ.)
- ಬಿ.ಎಂ.ಟಿ.ಸಿ/ಕೆ.ಎಸ್.ಆರ್.ಟಿ.ಸಿ ಬಸ್ ಚಾಲಕರಿಗೆ ಸಂಸ್ಥೆಯ ವಾಹನಗಳಿಂದ ಉಂಟಾಗುತ್ತಿರುವ ಹೆಚ್ಚಿನ ಸಂಖ್ಯೆಯ ಅಪಘಾತಗಳ ಕುರಿತು ತಿಳುವಳಿಕೆ ನೀಡಿ ಸಂಚಾರ ನಿಯಮಗಳ ಪಾಲನೆಯ ಮಹತ್ವ ಮತ್ತು ರಸ್ತೆ ಸುರಕ್ಷತೆ ಕುರಿತು ಬಿ.ಎಂ.ಟಿ.ಸಿ. ಡಿಪೋಗಳಿಗೆ ಖುದ್ದು ಭೇಟಿ ನೀಡಿ ತರಬೇತಿ ನೀಡುವ ಕಾರ್ಯಕ್ರಮವನ್ನು ಆಯೋಜಿಸಲಾಗಿರುತ್ತದೆ. ಅಪಘಾತಗಳ ನಿಯಂತ್ರಣಕ್ಕಾಗಿ ಮದ್ಯಪಾನ ಮಾಡಿ ವಾಹನ ಚಾಲನೆ ಹೆಲ್ಮೆಟ್ ರಹಿತ ಚಾಲನೆ, ಹಾಗೂ ಇನ್ನಿತರೆ ಗುಣಾತ್ಮಕ ಕೇಸುಗಳ ಬಗ್ಗೆ ವಿಶೇಷ ಕಾರ್ಯಚರಣೆಯನ್ನು ಹಮ್ಮಿಕೊಂಡು ಅಪಘಾತ ನಿಯಂತ್ರಣ ಮಾಡಲಾಗುತ್ತಿದೆ.

- ವಾಹನಗಳ ವೇಗವನ್ನು ನಿಯಂತ್ರಿಸಲು ರಂಬ್ಲರ್ ಸ್ಟ್ರಿಪ್ಸ್‌ಗಳನ್ನು ಹಾಕುವ ಬಗ್ಗೆ ಸಂಬಂಧಪಟ್ಟ ಪೌರಸಂಸ್ಥೆಗಳೊಂದಿಗೆ ಚರ್ಚಿಸಿ ಮಾಹಿತಿಯನ್ನು ಸಲ್ಲಿಸಲಾಗಿರುತ್ತದೆ.
- ರಸ್ತೆಯ ಹಾಗೂ ಸಿಗ್ನಲ್ ದೀಪಗಳ ಬದಿಗಳಲ್ಲಿ ಬೆಳೆದು ನಿಂತಿರುವ ಮರದ ಕೊಂಬೆಗಳನ್ನು ತೆರವುಗೊಳಿಸಿ ವಾಹನ ಸವಾರ/ ಚಾಲಕರಿಗೆ ರಸ್ತೆಯು ಸ್ಪಷ್ಟವಾಗಿ ಗೋಚರಿಸುವಂತೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಟ್ರಾಫಿಕ್ ವಾರ್ಡನ್ ಸಂಸ್ಥೆಯು ಬೆಂಗಳೂರು ನಗರ ಸಂಚಾರ ಪೊಲೀಸರಿಗೆ ರಸ್ತೆ ಸುರಕ್ಷತೆ ಮತ್ತು ಸಂಚಾರ ನಿಯಂತ್ರಣ ಚಟುವಟಿಕೆಯಲ್ಲಿ ಅವಿರತವಾಗಿ ಸಹಾಯವನ್ನು ಮಾಡುವಲ್ಲಿ ಶ್ರಮಿಸುತ್ತಿದ್ದು, ಈ ಸಂಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಸ್ವಯಂ ಪ್ರೇರಿತರಾಗಿ ಟ್ರಾಫಿಕ್ ವಾರ್ಡನ್ ಸೇವೆಗೆ ಸೇರಲು ಇಚ್ಛಿಸುವವರಿಗೆ ಠಾಣಾ ಮಟ್ಟದಲ್ಲಿ ಹೆಸರನ್ನು ನೊಂದಾಯಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ.
- ನಗರದ ವಿವಿಧ ಪ್ರಮುಖ ಶಾಲೆಗಳ ಮುಂಭಾಗ ನಿರಂತರವಾಗಿ ನಿಲ್ಲುತ್ತಿದ್ದ ಶಾಲಾ ವಾಹನಗಳನ್ನು ಶಾಲೆಯ ಕಾಂಪೌಂಡ್‌ನ ಒಳಗಡೆ ಕಳುಹಿಸಲು ಮತ್ತು ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- 12 ಹೈ ಡೆನ್ಸಿಟಿ ಕಾರಿಡಾರ್‌ಗಳನ್ನು ಗುರುತಿಸಿದ್ದು, ಸುಗಮ ಸಂಚಾರಕ್ಕೆ ಕೈಗೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ನೀಲನಕ್ಷೆಯನ್ನು ರೂಪಿಸಲಾಗುತ್ತಿದೆ.
- ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟ್ವಿಟರ್, ಯೂಟ್ಯೂಬ್ ಹಾಗೂ ಇನ್‌ಸ್ಟಾಗ್ರಾಮ್ ಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ ಮಹತ್ವದ ಬಗ್ಗೆ ಸಂದೇಶಗಳನ್ನು ರವಾನಿಸುವ ಹಾಗೂ ನಿಯಮ ಪಾಲನೆಯ ಬಗ್ಗೆ ಪೋಸ್ಟರ್‌ಗಳನ್ನು ಅಪ್‌ಲೋಡ್ ಮಾಡಲು ಕ್ರಮಕೈಗೊಂಡಿರುತ್ತದೆ.
- ನಗರದ 50 ಸಂಚಾರ ಪೊಲೀಸ್ ಠಾಣೆಗಳಲ್ಲಿಯೂ ಸಹ ಸಾಮಾಜಿಕ ಜಾಲತಾಣಗಳ ಪ್ರತ್ಯೇಕ ಐ.ಡಿಯನ್ನು ಸೃಜಿಸಲಾಗಿದ್ದು, ರಸ್ತೆ ನಿಯಮಗಳ ಪಾಲನೆಯ ಮಹತ್ವದ ಅರಿವು ಮೂಡಿಸುವ ಕಾರ್ಯವನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿರುತ್ತದೆ.
- ಮಾರಣಾಂತಿಕ ಅಪಘಾತಗಳು ಉಂಟಾಗಲು ಪ್ರಮುಖವಾಗಿ ಕಾರಣವಾಗುವ ನಿಯಮ ಉಲ್ಲಂಘನೆಗಳಾದ ಮದ್ಯಪಾನ ಮಾಡಿ ವಾಹನ ಚಾಲನೆ ಹಾಗೂ ಹೆಲ್ಮೆಟ್ ರಹಿತ ವಾಹನ ಚಾಲನೆಯ ಬಗ್ಗೆ ವಿಶೇಷವಾದ ಅಭಿಯಾನ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿರುತ್ತದೆ ಹಾಗೂ ಭಿತ್ತಿ ಪತ್ರಗಳನ್ನು ಹೊರಡಿಸಿ ಅರಿವು ಮೂಡಿಸುವ ಕಾರ್ಯವನ್ನು ಕೈಗೊಂಡಿರುತ್ತದೆ
- ಥಣಿಸಂದ್ರದಲ್ಲಿರುವ ಸಂಚಾರ ತರಬೇತಿ ಮತ್ತು ರಸ್ತೆ ಸುರಕ್ಷತಾ ಸಂಸ್ಥೆಯಲ್ಲಿ, ಕ್ಯಾಬ್ ಚಾಲಕರು, ಬಿ.ಎಂ.ಟಿ.ಸಿ. ಹಾಗೂ ಕೆ.ಎಸ್.ಆರ್.ಟಿ.ಸಿ. ವಾಹನ ಚಾಲಕರು, ಆಟೋ ಡ್ರೈವರ್ಸ್‌ಗಳು, ಐ.ಟಿ. ಕಂಪನಿಯ ನೌಕರರು, ಹೋಂ ಗಾರ್ಡ್ಸ್‌ಗಳು ಹಾಗೂ ಪೊಲೀಸ್ ಸಿಬ್ಬಂದಿಗಳಿಗೆ ತರಬೇತಿಯನ್ನು ಆಯೋಜಿಸುವ ಮೂಲಕ ರಸ್ತೆ ನಿಯಮಗಳ ಪಾಲನೆಯ ಮಹತ್ವದ ಬಗ್ಗೆ ಅರಿವು ಮೂಡಿಸಲಾಗುತ್ತಿರುತ್ತದೆ. ಕಳೆದ ಮೂರು ವರ್ಷಗಳಲ್ಲಿ ರಸ್ತೆ ನಿಯಮಗಳ ಪಾಲನೆಯ ಬಗ್ಗೆ ತರಬೇತಿ ನೀಡಿರುವ ವಿವರ ಈ ಕೆಳಕಂಡಂತಿರುತ್ತದೆ;

| ವರ್ಷ | ತರಬೇತಿ ಪಡೆದವರ ಸಂಖ್ಯೆ |
|---|---|
| 2021 | 5297 |
| 2022 | 24502 |
| 2023 | 30151 |

- ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುವ ಸ್ಥಳಗಳನ್ನು ಗುರ್ತಿಸಿ ಅಗತ್ಯ ಕೋಬ್ರಾ ಸಿಬ್ಬಂದಿಗಳನ್ನು ಗಸ್ತು ಕರ್ತವ್ಯಕ್ಕೆ ನೇಮಕ ಮಾಡಲಾಗಿದ್ದು, ಇನ್ನೂ ಹೆಚ್ಚಿನ ಗಸ್ತು ಸಿಬ್ಬಂದಿಗಳನ್ನು ನೇಮಕ ಮಾಡಿ ಅಪಘಾತಗಳನ್ನು ತಡೆಗಟ್ಟಲು ಕ್ರಮವಹಿಸಲಾಗುವುದು.
- ರಸ್ತೆ ಸುರಕ್ಷತೆ ಹಾಗೂ ಸಂಚಾರ ನಿಯಮ ಪಾಲನೆಯ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಕಾರ್ಯಕ್ರಮಗಳನ್ನು ಆಯೋಜಿಸಲು ಕ್ರಮವಹಿಸಲಾಗುವುದು.
- ಬೆಂಗಳೂರು ನಗರ ಪೊಲೀಸ್ ವತಿಯಿಂದ ಸೇಫ್ ಸಿಟಿ ಯೋಜನೆಯಡಿಯಲ್ಲಿ ಈಗಾಗಲೇ 5058 ಸಿ.ಸಿ.ಟಿ.ವಿ. ಕ್ಯಾಮೆರಾಗಳನ್ನು ಅವಳಡಿಸಲಾಗಿದ್ದು, ಸದರಿ ಕ್ಯಾಮರಾಗಳನ್ನು ಕಮಾಂಡ್ ಸೆಂಟರ್ ನಿಂದ ನಿಯಂತ್ರಿಸಬಹುದಾಗಿದ್ದು, ಅವುಗಳ ಸಮಾನಾಂತರ ವೀಕ್ಷಣೆಗಾಗಿ ಸಂಚಾರ ನಿರ್ವಹಣಾ ಕೇಂದ್ರದಲ್ಲಿ ಸಂಪರ್ಕದ ವ್ಯವಸ್ಥೆಯನ್ನು ನೀಡಲಾಗಿರುತ್ತದೆ.
- ಬೆಂಗಳೂರು ನಗರ ಸಂಚಾರ ವಿಭಾಗಕ್ಕೆ ಸಂಪರ್ಕರಹಿತ ನಿಯಮ ಜಾರಿಯ ವ್ಯವಸ್ಥೆಯನ್ನು ಉತ್ತೇಜಿಸುವ ಸಲುವಾಗಿ ಇಂಟೆಲಿಜೆನ್ಸ್ ಟ್ರಾಫಿಕ್ ಮಾನ್ಯೇಜ್‌ಮೆಂಟ್ ಸಿಸ್ಟಂ ಅಡಿಯಲ್ಲಿ ಒಟ್ಟು 250 ಎ.ಎನ್.ಪಿ.ಆರ್. ಹಾಗೂ 80 ಆರ್.ಎಲ್.ಡಿ.ವಿ. ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಪರಿಣಾಮಕಾರಿಯಾಗಿ ಬಳಸಲಾಗುತ್ತಿರುತ್ತದೆ.

***